VK ವಿಜಯ ಕರ್ನಾಟಕ

# Monday 31st July 2017

# Benet University VC Dr. Yaj Medury Chief Guest at RVCE Convocation Ceremony 2017

### ದೆಹಲಿಯ ಬೆನೆಟ್ ವಿವಿಯ ಉಪ ಕುಲಪತಿ ಡಾ.ಯಜ್ ಮೆದುರಿ ಅಭಿಮತ

## ಸಾಧನೆ ಮಾಡುವ ಮೂಲಕ ಕೀರ್ತಿ ತನ್ನಿ



ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ ಏಳನೇಯ ಪದವಿ ಪ್ರದಾನ ಸಮಾರಂಭದಲ್ಲಿ ದೆಹಲಿಯ ಬೆನೆಟ್ ವಿಶ್ವವಿದ್ಯಾಲಯದ ಉಪಕುಲಪತಿ ಡಾ ಯಜ್ ಮೆದುರಿ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರಧಾನ ಮಾಡಲಾಯಿತು. ಎಂ ಕೆ ಪಾಂಡುರಂಗ ಶೆಟ್ಟಿ, ಕೆಎನ್ ಸುಬ್ರಹ್ಮಣ್ಯ ಮತ್ತಿತರರು ಇದ್ದರು.

**ವಿಕ ಸುದ್ದಿಲೋಕ** ಕೆಂಗೇರಿ ಉಪನಗರ

ಪ್ರಸ್ತುತ ದಿನಗಳಲ್ಲಿ ಎಲ್ಲ ಕ್ಷೇತ್ರದಲ್ಲಿ ಸ್ಪರ್ಧೆ ಇದೆ. ಹೀಗಾಗಿ ಸವಾಲುಗಳನ್ನು ಎದುರಿಸಿ ಮಹತ್ತರ ಸಾಧನೆ ಮಾಡಬೇಕಾಗಿದೆ ಎಂದು ದೆಹಲಿಯ ಬೆನೆಟ್ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ಯಜ್ ಮೆದುರಿ ಹೇಳಿದರು.

ಮೈಸೂರು ರಸ್ತೆಯ ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ ಏಳನೇ ಪದವಿ ಪ್ರಧಾನ ಸಮಾರಂಭದಲ್ಲಿ ಅವರು ಮಾತನಾಡಿದರು.

''ನಮ್ಮ ವಿಜ್ಞಾನಿಗಳು ಹಾಗೂ ಸಂಶೋಧಕರು ರೂಪಿಸಿರುವ ತಂತ್ರಜ್ಞಾನದಿಂದ ಭಾರತೀಯರಿಗೆ ಜಾಗತಿಕ ಮಟ್ಟದಲ್ಲಿ ಯಶಸ್ಸು ಪಡೆಯಲು ಸಾಧ್ಯವಾಗಿದೆ,'' ಎಂದರು.

''ವಿಶ್ವದಲ್ಲಿಯೇ ಭಾರತ ಆರ್ಥಿಕ ಪ್ರಗತಿ ಕಡೆಗೆ ದಾಪುಗಾಲು ಹಾಕುತ್ತಿದ್ದು, ಅದನ್ನು ಬೆಳೆಸಿಕೊಂಡು ಹೋಗುವ ಸವಾಲು ನಮ್ಮ ಮುಂದೆ ಇದೆ. ಅದಕ್ಕಾಗಿ ಸಮೂಹ ಹೊಣೆಗಾರಿಕೆ ಹೊರಬೇಕಾಗಿದೆ. ಅದೇ ರೀತಿ ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನಕ್ಕೆ ತಕ್ಕಂತೆ ಸಂಶೋಧನೆ ಹಾಗೂ ಸಾಮಾಜಿಕ ಜವಾಬ್ದಾರಿ ವಹಿಸಬೇಕು,'' ಎಂದು ಹೇಳಿದರು.

ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ ಎಂ ಕೆ ಪಾಂಡುರಂಗ ಶೆಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಖಜಾಂಚಿ ಕೆ ಜಿ ಸುಬ್ರಹ್ಮಣ್ಯ ಶೆಟ್ಟಿ, ಕಾರ್ಯದರ್ಶಿ ಎ ವಿ ಎಸ್ ಮೂರ್ತಿ, ಸಹ ಕಾರ್ಯದರ್ಶಿ ಡಿ ಪಿ ನಾಗರಾಜ್, ಉದ್ಯಮಿ ಡಾ ಎಂ ಪಿ ಶಾಮ್, ಪ್ರಾಂಶುಪಾಲ ಕೆ ಎನ್ ಸುಬ್ರಹ್ಮಣ್ಯ ಹಾಗೂ ಕಾಲೇಜಿನ ವಿವಿಧ ವಿಭಾಗದ ಮುಖ್ಯಸ್ಥರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ 1077 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. 12 ಜನ ವಿದ್ಯಾರ್ಥಿಗಳಿಗೆ ಬಂಗಾರದ ಪದಕ ಹಾಗೂ ಎಲ್ಲಾ ವಿಭಾಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಇಬ್ಬರಿಗೆ ಬಂಗಾರದ ಪದಕ, ರ್‍ಯಾಂಕ್ ಪಡೆದ 91 ವಿದ್ಯಾರ್ಥಿಗಳಿಗೆ ಪದಕ ಹಾಗೂ ಪ್ರಮಾಣ ಪತ್ರ ವಿತರಿಸಲಾಯಿತು.